# ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸುಳ್ಯ, ದ.ಕ

## ಸಿ.ಸಿ ಸಂಖ್ಯೆ: 3/2022

| | |
|---|---|
| ಹೆಸರು | :ಪುಟ್ಟಸ್ವಾಮಿ |
| ತಂದೆಯ ಹೆಸರು | :ಸಿದ್ದಯ್ಯ |
| ಪ್ರಾಯ | :68 ವರ್ಷ |
| ಉದ್ಯೋಗ | :ನಿವೃತ್ತ ಕಾರ್ಯ ನಿರ್ವಹಣಾಧಿಕಾರಿ, ತಾಲೂಕು ಪಂಚಾಯತ್ |
| ವಾಸ | :ಮೈಸೂರು |

**ದಿನಾಂಕ 16.01.2024 ರಂದು ಸಾಕ್ಷಿಯನ್ನು ಕರೆಸಿ ವಿಧಿಬದ್ಧವಾಗಿ ಪ್ರಮಾಣವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದ:**

ನಾನು 2005 ರಿಂದ 2010 ರವರೆಗೆ ಸುಳ್ಯ ತಾಲೂಕು ಪಂಚಾಯಿತಿಯಲ್ಲಿ ಕಾರ್ಯ ನಿರ್ವಹಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೆ.

ದಿ: 10.11.2010 ರಲ್ಲಿ ಮರ್ಕಂಜ ಗ್ರಾಮ ಪಂಚಾಯಿತಿ ಸಾರ್ವಜನಿಕರಿಂದ ಪಂಚಾಯಿತಿ ಅಧ್ಯಕ್ಷರಾದ ಶಿವರಾಮೇ ಗೌಡ, ಕಾರ್ಯದರ್ಶಿ ಪ್ರೇಮ್ ಸಿಂಗ್ ರವರು ಸಾರ್ವಜನಿಕರಿಗೆ ಸರ್ಕಾರದಿಂದ ಬರುವ ಸೌಲಭ್ಯಗಳ ಕುರಿತು, ಸಹಾಯ ಧನವನ್ನು ಸಾರ್ವಜನಿಕರಿಗೆ ಕೊಡದೇ ತಮ್ಮ ಸಹಿಗಳನ್ನು ದುರುಪಯೋಗ ಪಡಿಸಿಕೊಂಡು ಸಾರ್ವಜನಿಕರಿಗೆ ಮೋಸ ಮಾಡುತ್ತಿರುವ ಬಗ್ಗೆ ಮತ್ತು ಇದರಲ್ಲಿ ಪಂಚಾಯಿತಿಯ ಸಿಬ್ಬಂದಿಯಾದ ಕೇಶವ ಎಂಬಾತನೂ ಸಹ ಶಾಮೀಲಾಗಿರುವ ಬಗ್ಗೆ ದೂರು ಬಂದಿದ್ದು, ಸದರಿ ದೂರನ್ನು ನಾನು ಜಿಲ್ಲಾ ಪಂಚಾಯಿತಿಗೆ ವರ್ಗಾಯಿಸಿದ್ದು, ಸದರಿ ದೂರಿನನ್ವಯ ಜಿಲ್ಲಾ ಪಂಚಾಯಿತಿಯ ಮುಖ್ಯ ಯೋಜನಾಧಿಕಾರಿಗಳು ಸದರಿ ದೂರಿನ ಕುರಿತು ಮುಖ್ಯ

ಯೋಜನಾಧಿಕಾರಿಗಳು, ಸಹಾಯಕ ನಿರ್ದೇಶಕರು, ಸಹಾಯಕ ಕಾರ್ಯಪಾಲಕ ಅಭಿಯಂತರರು ಮೇಲ್ವಿಚಾರಣೆಯಲ್ಲಿ ಸಮಿತಿ ರಚನೆ ಮಾಡಿದ್ದು, ಸದರಿ ಸಮಿತಿ ಸದರಿ ದೂರಿನನ್ವಯ ವಿಚಾರಣೆ ಮಾಡಿ ಒಂದು ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯ ಒಂದು ಪ್ರತಿಯನ್ನು ಜಿಲ್ಲಾ ಪಂಚಾಯಿತಿಯ ಮುಖ್ಯ ಯೋಜನಾಧಿಕಾರಿಗಳು ನನಗೆ ಕಳುಹಿಸಿ ಸದರಿ ವರದಿಯ ಆಧಾರದ ಮೇಲೆ ಮರ್ಕಂಜ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಶಿವರಾಮೇ ಗೌಡ, ಕಾರ್ಯದರ್ಶಿ ಪ್ರೇಮ್ ಸಿಂಗ್, ಗುಮಾಸ್ತ ಕೇಶವ ರವರ ವಿರುದ್ದ ಸುಳ್ಯ ಪೊಲೀಸ್ ಠಾಣೆಗೆ ದಿಃ 10.11.2010 ರಂದು ದೂರು ನೀಡಿರುತ್ತೇನೆ. ಸದರಿ ದೂರನ್ನು ನೋಡುತ್ತಿದ್ದು, ಅದನ್ನು ನಿಪಿ-2 ಎಂದು, ಸಾಕ್ಷಿ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

ದಿಃ 18.11.2010 ರಂದು ಪೊಲೀಸರು ಮರ್ಕಂಜ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಗ್ರಾಮ ಪಂಚಾಯಿತಿಯಲ್ಲಿ ಪಂಚನಾಮೆ ಮಾಡಿರುತ್ತಾರೆ. ಸದರಿ ಪಂಚನಾಮೆಯನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸದರಿ ಪಂಚನಾಮೆ ಸಮಯದಲ್ಲಿ ಉತ್ತಯ್ಯ ಮತ್ತು ವಾಸುದೇವ ಎಂಬುವವರು ಇದ್ದರು. 2 ಮತ್ತು 3 ನೇ ಆರೋಪಿತರನ್ನು ನ್ಯಾಯಾಲಯದ ಮುಂದೆ ನೋಡಿ ಗುರುತಿಸುತ್ತೇನೆ. 1 ನೇ ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. 1 ನೇ ಆರೋಪಿ ಗೈರು ಹಾಜರಿದ್ದು ಆತನ ಗುರುತಿಸುವಿಕೆಯ ಬಗ್ಗೆ ಯಾವುದೇ ತಕರಾರು ಇಲ್ಲ ಎಂದು ಆರೋಪಿ ಪರ ವಕೀಲರು ತಿಳಿಸಿರುತ್ತಾರೆ.

**ಪಾಟೀ ಸವಾಲುಃ 1 ನೇ ಆರೋಪಿ ಪರ ಶ್ರೀ ಎನ್.ಕೆ ವಕೀಲರಿಂದಃ**

ಸಾರ್ವಜನಿಕರು ನೀಡಿದ ದೂರನ್ನು ನಾನು ಯಥಾವತ್ತಾಗಿ ಜಿಲ್ಲಾ ಪಂಚಾಯಿತಿಗೆ ಕಳುಹಿಸಿರುತ್ತೇನೆ. ಆದ್ದರಿಂದ ಸದರಿ ದೂರು ತಾಲೂಕು ಪಂಚಾಯಿತಿಯಲ್ಲಿ ಇರುವುದಿಲ್ಲ. ಆ ರೀತಿ ಸಾರ್ವಜನಿಕರಿಂದ ನಮಗೆ ಯಾವುದೇ ದೂರು ಬಂದಿರುವುದಿಲ್ಲ ಎಂದರೆ ಸರಿಯಲ್ಲ. ಯಾವ ವರ್ಷಕ್ಕೆ ಸಂಬಂಧಪಟ್ಟಂತೆ ಹಣ ದುರುಪಯೋಗವಾಗಿದೆ ಎಂಬ ಬಗ್ಗೆ ನನಗೆ ನೆನಪಿಲ್ಲ. ನನಗೆ ಸಾರ್ವಜನಿಕರಿಂದ ದೂರು ಬರುವುದಕ್ಕಿಂತ ಸುಮಾರು 4-5

ವರ್ಷಗಳ ಹಿಂದಿನಿಂದ ನಾನು ಸುಳ್ಯ ತಾಲೂಕು ಪಂಚಾಯಿತಿಯಲ್ಲಿ ಕಾರ್ಯ ನಿರ್ವಹಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೆ. ರಾಜೀವ್ ಗಾಂಧಿ ವಸತಿ ಯೋಜನೆಯಡಿ ಬರುವ ಧನ ಸಹಾಯ ಸರಿಯಾಗಿ ವಿತರಣೆಯಾಗಿಲ್ಲ ಎಂದು ಸಾರ್ವಜನಿಕರು ದೂರು ನೀಡಿದ್ದರು. ರಾಜೀವ್ ಗಾಂಧಿ ವಸತಿ ಯೋಜನೆಯಡಿಯಲ್ಲಿ ವಸತಿ ಯೋಜನೆಯನ್ನು ಯಾವ ರೀತಿ ಜಾರಿ ಮಾಡಬೇಕು ಎಂಬ ಬಗ್ಗೆ ತಾಲೂಕು ಪಂಚಾಯಿತಿಯಲ್ಲಿ ಯೋಜನೆ ತಯಾರು ಮಾಡಲಾಗುತ್ತದೆ ಎಂದರೆ ಸರಿ. ಆದರೆ ಅದನ್ನು ಜಾರಿಗೊಳಿಸುವ ಕರ್ತವ್ಯ ಗ್ರಾಮ ಪಂಚಾಯಿತಿಗೆ ನೀಡಲಾಗುತ್ತದೆ. ಆದರೆ ಅದರ ಮೇಲುಸ್ತುವಾರಿಯನ್ನು ತಾಲೂಕು ಪಂಚಾಯಿತಿ ನೋಡಿಕೊಳ್ಳುತ್ತದೆ. ತಾಲೂಕು ಪಂಚಾಯಿತಿಯಲ್ಲಿ ನಾನು ಮುಖ್ಯ ಅಧಿಕಾರಿಯಾಗಿರುತ್ತೇನೆ ಎಂದರೆ ಸರಿ. ನನಗೆ ಆರೋಪಿಗಳ ಬಗ್ಗೆ ಹೆಚ್ಚಿನ ಮಾಹಿತಿ ಇತ್ತು ಎಂದರೆ ಸರಿ. ನಾನು ಅಧಿಕಾರ ಅವಧಿಯಲ್ಲಿ ಪಂಚಾಯತ್ ರಾಜ್ಯ ಅಧಿನಿಯಮದಡಿಯಲ್ಲಿ ನನ್ನ ಕರ್ತವ್ಯವನ್ನು ಸರಿಯಾಗಿ ಪಾಲನೆ ಮಾಡಿದ್ದೇನೆ ಎಂದರೆ ಸರಿ. ನನ್ನ ಹಿಂದಿನ 4 ವರ್ಷದ ಅಧಿಕಾರ ಅವಧಿಯಲ್ಲಿ ವೈಯಕ್ತಿಕವಾಗಿ ಆರೋಪಿಗಳು ಹಣ ದುರುಪಯೋಗ ಮಾಡಿದ ಬಗ್ಗೆ ನನಗೆ ಕಂಡು ಬಂದಿರಲಿಲ್ಲ ಎಂದರೆ ಸರಿ. ಸರ್ಕಾರದ ವತಿಯಿಂದ ಪ್ರತೀ ವರ್ಷ ಗ್ರಾಮ ಪಂಚಾಯಿತಿ ಕಾರ್ಯಾಲಯದ ಲೆಕ್ಕ ಪತ್ರಗಳ ಪರಿಶೀಲನೆ ಮಾಡಲಾಗುತ್ತದೆ ಎಂದರೆ ಸರಿ. ಸದರಿ ಲೆಕ್ಕ ಪತ್ರ ಪರಿಶೀಲನೆ ಮಾಡಿದ ಬಗ್ಗೆ ವರದಿಯನ್ನು ನೇರವಾಗಿ ಜಿಲ್ಲಾ ಪಂಚಾಯಿತಿಗೆ ನೀಡಲಾಗುತ್ತದೆ. ಆ ರೀತಿ ಲೆಕ್ಕ ಪತ್ರ ಪರಿಶೀಲನಾ ವರದಿಯಲ್ಲಿ ಹಣ ದುರುಪಯೋಗ ಆದ ಬಗ್ಗೆ ಜಿಲ್ಲಾ ಪಂಚಾಯಿತಿಯಿಂದ ನನಗೆ ಮಾಹಿತಿ ಬಂದಿಲ್ಲ. ಜಿಲ್ಲಾ ಪಂಚಾಯಿತಿಯಿಂದ ನೇಮಕ ಮಾಡಿದ ಸಮಿತಿ ನನ್ನನ್ನು ವಿಚಾರಣೆ ಮಾಡಿರುವುದಿಲ್ಲ. ಸದರಿ ಸಮಿತಿ ಯಾವ ಆಧಾರದ ಮೇಲೆ ಗ್ರಾಮ ಪಂಚಾಯಿತಿಯಲ್ಲಿ ಹಣ ದುರುಪಯೋಗ ಆಗಿದೆ ಎಂದು ವರದಿ ನೀಡಿದ್ದಾರೆ ಎಂದು ನನಗೆ ಮಾಹಿತಿ ಇಲ್ಲ ಎಂದರೆ ಸರಿ. ತನಿಖಾ ವರದಿಯ ನಕಲನ್ನು ನನಗೆ ನೀಡಿದ್ದರೋ ಇಲ್ಲವೋ ಎಂದು ಈಗ ನನಗೆ ನೆನಪಿಲ್ಲ. ನನಗೆ ಆ ರೀತಿ ಯಾವುದೇ ತನಿಖಾ ವರದಿ ಬಂದಿಲ್ಲ ಎಂದರೆ ಸರಿಯಲ್ಲ. ನನ್ನ ಜವಾಬ್ದಾರಿಯಿಂದ ತಪ್ಪಿಸಿಕೊಳ್ಳುವ ಉದ್ದೇಶಕ್ಕೆ ಸುಳ್ಳು ದೂರನ್ನು ನೀಡಿದ್ದೇನೆ ಎಂದರೆ ಸರಿಯಲ್ಲ. ನಾನು

ದೂರಿನಲ್ಲಿ ಹೇಳಿದಂತೆ ಗ್ರಾಮ ಪಂಚಾಯಿತಿಯಲ್ಲಿ ಯಾವುದೇ ಹಣ ದುರುಪಯೋಗವಾಗಿದೆ ಎಂದರೆ ಸರಿಯಲ್ಲ. ಪಂಚನಾಮೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೀರಾ ಎಂದರೆ ನನಗೆ ನೆನಪಿಲ್ಲ. ಸುಳ್ಳು ದೂರಿಗೆ ಪೂರಕವಾಗಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 2 ಮತ್ತು 3 ನೇ ಆರೋಪಿ ಪರ ಶ್ರೀ ಕೆ.ಎಂ.ಕೆ ವಕೀಲರು ಮೇಲಿನ ಪಾಟೀ ಸವಾಲನ್ನೇ ಅಳವಡಿಸಿಕೊಂಡಿರುತ್ತಾರೆ.**

**ಮರುವಿಚಾರಣೆ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

**(ಸಾ.ಓ.ಹೇ.ಕೇ.ಸ.ಇ.ಎ.ಒ)**

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ. ಸುಳ್ಯ